221 (309) ಶ್ರೀ ಕುಮಾರ್ ಬಂಗಾರಪ್ಪ ಎಸ್. (ಸೊರಬ) – ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರ ಸಂಕಷ್ಟವನ್ನು ಸುಧಾರಣೆ ಮಾಡುವ ವಿಶೇಷ ಪ್ಯಾಕೇಜ್ ಅಡಿಯಲ್ಲಿ ಬರುವ ಕಾಮಗಾರಿಗಳನ್ನು ಸರ್ಕಾರ ಯಾವಾಗ ಪ್ರಾರಂಭ ಮಾಡಲಾಗುವುದು ;

ಆ) ನಬಾರ್ಡ್ ಕಾರ್ಯಕ್ರಮ ಪಟ್ಟಿಯಡಿಯಲ್ಲಿ ಅನುಮೋದನೆಗೊಂಡ ಎಲ್ಲಾ ಕಾಮಗಾರಿಗಳನ್ನು ಪ್ರಾರಂಭ ಮಾಡಲಾಗಿದೆಯೇ ;

ಇ) ಹಾಗಿಲ್ಲದಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು ;

ಈ) ರಾಜ್ಯದಲ್ಲಿರುವ ಎಲ್ಲಾ ಕೆರೆಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆಯೇ ;

ಉ) ರಾಜ್ಯದಲ್ಲಿ ನದಿ-ಹಳ್ಳಗಳಿಗೆ ಎಷ್ಟು ಬ್ಯಾರೇಜ್ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ;

ಊ) ಸೊರಬ ತಾಲ್ಲೂಕಿನ ಜಂಗಿನಕೊಪ್ಪ ಬ್ಯಾರೇಜ್‌ನಿಂದ ಅನೇಕ ಕೆರೆಗಳಿಗೆ ನೀರು ಹರಿಸಲು ಚಾನಲ್ ನಿರ್ಮಾಣ ಯೋಜನೆಯನ್ನು ರೂಪಿಸಲಾಗಿದೆಯೇ ?

ಶ್ರೀ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು) –

ಅ) ವಿಶೇಷ ಪ್ಯಾಕೇಜ್‌ನಡಿ ಕೈಗೊಳ್ಳುವ ಕಾಮಗಾರಿಗಳ ಆಯ್ಕೆಯ ಪ್ರಕ್ರಿಯೆ ನಡೆಯುತ್ತಿದ್ದು, ಈ ಕಾರ್ಯ ಪೂರ್ಣಗೊಂಡ ನಂತರ ನಿಯಮಾನುಸಾರ ಕಾಮಗಾರಿಗಳ ಅಂದಾಜುಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿ ತದನಂತರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಆ) ಇಲ್ಲ.

ಇ) ನಬಾರ್ಡ್ ಆರ್.ಐ.ಡಿ.ಎಫ್.–11ರವರೆಗೆ ಒಟ್ಟು 882 ಕಾಮಗಾರಿಗಳು ಅನುಮೋದನೆಯಾಗಿದ್ದು, ಈ ಪೈಕಿ 427 ಕಾಮಗಾರಿಗಳು ಪೂರ್ಣಗೊಂಡಿವೆ. 327 ಕಾಮಗಾರಿಗಳ ಪ್ರಗತಿಯಲ್ಲಿವೆ ಹಾಗೂ 128 ಕಾಮಗಾರಿಗಳನ್ನು ಪ್ರಾರಂಭಿಸಬೇಕಾಗಿದ್ದು, ಪ್ರಾರಂಭಿಸಬೇಕಾಗಿರುವ ಬಹುತೇಕ

ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಗಳು ಪ್ರಗತಿಯಲ್ಲಿವೆ. ಈ ಎಲ್ಲಾ ಕಾಮಗಾರಿಗಳನ್ನು ಒಂದೆರಡು ತಿಂಗಳಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಈ) ಅನುದಾನದ ಲಭ್ಯತೆಯ ಮೇಲೆ ಕೆರೆಗಳ ಅಭಿವೃದ್ಧಿ ಪಡಿಸಲಾಗುವುದು.

ಉ) 243 ಬ್ಯಾರೇಜ್‌ಗಳನ್ನು ನಿರ್ಮಿಸಲು ಯೋಜಿಸಿದೆ.

ಊ) ರೂಪಿಸಿದ್ದು, ಪರಿಶೀಲನಾ ಹಂತದಲ್ಲಿದೆ.

222 (310) : ಶ್ರೀ ಕುಮಾರ್ ಬಂಗಾರಪ್ಪ ಎಸ್. (ಸೊರಬ) – ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೊರಬ ತಾಲ್ಲೂಕಿನಲ್ಲಿ ಮಂಜೂರಾದ ಸಣ್ಣ ಕೈಗಾರಿಕೆಗಳು ಯಾವುವು ;

ಆ) ಸಣ್ಣ ಕೈಗಾರಿಕೆಗಾಗಿ ಜಮೀನನ್ನು ಸ್ವಾಧೀನಪಡಿಸಿ ಕೊಳ್ಳಲಾಗಿದೆಯೇ ; (ಅದರ ವಿವರ ನೀಡುವುದು) ;

ಇ) ಹಾಗಿಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ;

ಈ) ಸಣ್ಣ ಕೈಗಾರಿಕೆಗಳನ್ನು ಈ ತಾಲ್ಲೂಕಿನಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು ?

ಶ್ರೀ ಶಿವಾನಂದ ನಾಯ್ಕ್ (ಸಣ್ಣ ಕೈಗಾರಿಕಾ ಸಚಿವರು) –

ಅ) ಸೊರಬ ತಾಲ್ಲೂಕಿನಲ್ಲಿ 936 ಸಣ್ಣ ಕೈಗಾರಿಕೆಗಳು ನೊಂದಣಿಯಾಗಿರುತ್ತದೆ. ವರ್ಗವಾರು ಪಟ್ಟಿಯನ್ನು ಅನುಬಂಧ–ಅ ನಲ್ಲಿ ಲಗತ್ತಿಸಿದೆ.

ಆ) ಕೆ.ಎಸ್.ಎಸ್.ಐ.ಡಿ.ಸಿ. ವತಿಯಿಂದ ಸೊರಬದಲ್ಲಿ ಕೈಗಾರಿಕಾ ವಸಾಹತು ಸ್ಥಾಪನೆಗಾಗಿ, ಸೊರಬ ಪಟ್ಟಣ ಹಿರೆಶಕುನ ಗ್ರಾಮದ ಸರ್ವೆ ನಂ.113ರಲ್ಲಿ ಲಭ್ಯವಿರುವ ಇಪ್ಪತ್ತು ಎಕರೆ ಸರ್ಕಾರಿ ಜಮೀನನ್ನು ಗುರುತಿಸಿದ್ದು, ಕೆ.ಎಸ್.ಎಸ್.ಐ.ಡಿ.ಸಿ.ಗೆ ಮಂಜೂರು ಮಾಡಲು ಪ್ರಸ್ತಾವನೆಯನ್ನು ತಹಶೀಲ್ದಾರ್‌ರವರು ಉಪ ವಿಭಾಗಾಧಿಕಾರಿಗಳು, ಸಾಗರರವರಿಗೆ ಸಲ್ಲಿಸಿರುತ್ತಾರೆ.